# ಗುರುವಾರ ಬಿಎಸ್‌ವೈ ಪ್ರಮಾಣ

- ಇಂದು ಗೌರ್ನರ್ ಭೇಟಿ
- ಶುಕ್ರವಾರ ಬಹುಮತ ಸಾಬೀತು ಸಂಭವ
- ಹೈಕಮಾಂಡ್ ಜತೆ ಸಮಾಲೋಚನೆ
- ದೆಹಲಿಯಿಂದ ಬರಲಿದ್ದಾರೆ ವೀಕ್ಷಕರು
- ಸಂಪುಟ ರಚನೆ ಕಸರತ್ತು ಆರಂಭ

ಬೆಂಗಳೂರು: ಮುಖ್ಯಮಂತ್ರಿ ಕುಮಾರಸ್ವಾಮಿ ನೇತೃತ್ವದ ಸರ್ಕಾರ ಪತನಗೊಳ್ಳುತ್ತಿದ್ದಂತೆಯೇ ಸರ್ಕಾರ ರಚನೆಗೆ ಬಿಜೆಪಿ ಪಾಳಯದಲ್ಲಿ ಚಟುವಟಿಕೆ ಬಿರುಸುಗೊಂಡಿದೆ. ಪಕ್ಷದ ರಾಜ್ಯಾಧ್ಯಕ್ಷ ಬಿ.ಎಸ್.ಯಡಿಯೂರಪ್ಪ ಗುರುವಾರ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುವ ಸಂಭವವಿದೆ.

ಮುಂದಿನ ಕ್ರಮಗಳ ಕುರಿತು ಯಡಿಯೂರಪ್ಪ ಪಕ್ಷದ ಹೈಕಮಾಂಡ್ ನಾಯಕರ ಜತೆ ಸಮಾಲೋಚನೆ ಮುಂದುವರೆಸಿದ್ದಾರೆ. ಹೈಕಮಾಂಡ್ ವೀಕ್ಷಕರೊಬ್ಬರನ್ನು ಕಳುಹಿಸಲಿದೆ. ಬಿಜೆಪಿ ಶಾಸಕರು ರೆಸಾರ್ಟ್‌ನಲ್ಲಿ ವಾಸ್ತವ್ಯ ಮುಂದುವರೆಸಿದ್ದು ನಾಳೆ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ನಂತರ ಯಡಿಯೂರಪ್ಪ ರಾಜ್ಯಪಾಲ ವಜುಭಾಯಿವಾಲಾ ಅವರನ್ನು ಭೇಟಿ ಮಾಡಿ ಸರ್ಕಾರ ರಚನೆಗೆ ಅವಕಾಶ ಕೋರಲಿದ್ದಾರೆ. ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕಾರ ಮಾಡಿದ ನಂತರ ಯಡಿಯೂರಪ್ಪ ಸದನದಲ್ಲಿ ಬಹುಮತ ಸಾಬೀತು ಮಾಡಬೇಕಾಗಿದ್ದು ಶುಕ್ರವಾರ ಅದಕ್ಕೆ ಸಮಯ ನಿಗದಿಯಾಗುವ ಸಾಧ್ಯತೆಯಿದೆ. ಇದೇ ತಿಂಗಳು 31ರೊಳಗಾಗಿ ಹಣಕಾಸು ವಿಧೇಯಕಕ್ಕೆ ಅಂಗೀಕಾರ ದೊರೆಯಬೇಕಾಗಿದೆ.

ಇಲ್ಲವಾದರೆ ಸರ್ಕಾರಿ ನೌಕರರ ವೇತನ ಪಾವತಿ ಇತ್ಯಾದಿಗಳು ನೆನೆಗುದಿಗೆ ಬೀಳಲಿದೆ. ವಿಶ್ವಾಸಮತಯಾಚನೆ ಪೂರ್ಣಗೊಂಡ ನಂತರ ಹಣಕಾಸು ವಿಧೇಯಕಕ್ಕೆ ಅಂಗೀಕಾರ ಪಡೆಯಬೇಕಾಗಿದೆ. ಸರ್ಕಾರ ಪತನ ಆಗುತ್ತಿದ್ದಂತೆಯೇ ಸಂಪುಟ ರಚನೆ ಕುರಿತು ಚರ್ಚೆಗಳು ಬಿಜೆಪಿ ವಲಯದಲ್ಲಿ ಆರಂಭ ಆಗಿದೆ. ಇನ್ನು ಮುಂಬೈಯಲ್ಲಿರುವ ಎಲ್ಲಾ 15 ಮಂದಿ ಅತೃಪ್ತ ಶಾಸಕರು ಬೆಂಗಳೂರಿನತ್ತ ಪ್ರಯಾಣ ಬೆಳೆಸಿದ್ದಾರೆ.

